**All India Radio: Bangalore**
**Regional Bulletin In Kannada**
**30.08.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.08.2025 / 2.30 p.m.**

**<><><><>**

ಮುಖ್ಯಾಂಶಗಳು :

- ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ ಪ್ರದಾನ ಮಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
- ಧರ್ಮಸ್ಥಳ ಪ್ರಕರಣ ; ಮಹಜರಿಗಾಗಿ ದೂರುದಾರ ಆರೋಪಿ ಚಿನ್ನಯ್ಯನನ್ನು ತಮಿಳುನಾಡಿಗೆ ಕರೆದೊಯ್ದ ಎಸ್ಐಟಿ ಅಧಿಕಾರಿಗಳು
- ಆಪರೇಷನ್ ಸಿಂದೂರದ ಮೂಲಕ ಭಾರತೀಯ ಸೇನೆಯ ಶಕ್ತಿ ಅನಾವರಣ - ಮೇಘಾಲಯ ರಾಜ್ಯಪಾಲ ಸಿ.ಎಚ್.ವಿಜಯ್‌ಶಂಕರ್
- ಮಾಹಿತಿ ತಂತ್ರಜ್ಞಾನ, ಸೇವಾ ರಫ್ತಿನಲ್ಲಿ ದೇಶದಲ್ಲಿಯೇ ಕರ್ನಾಟಕ ಪ್ರಥಮ ಸ್ಥಾನ

><><><><><><><><><

ಅತ್ಯುತ್ತಮ ಸೇವೆ ಸಲ್ಲಿಸಿದ, ರಾಜ್ಯದ ೭೮ ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ ಹಾಗೂ ೨೮ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗೆ, ಕೇಂದ್ರ ಗೃಹ ಸಚಿವರ ಪದಕಗಳನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಬೆಂಗಳೂರಿನ ರಾಜಭವನ ಆವರಣದ ಗಾಜಿನ ಮನೆಯಲ್ಲಿಂದು ಪ್ರದಾನ ಮಾಡಿದರು.  ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಿದ್ದರು. ಈ ವೇಳೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೇರಿದಂತೆ ಅನೇಕ ಸಚಿವರು ಉಪಸ್ಥಿತರಿದ್ದರು.

><><><><><><><><><

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ವ್ಯಾಪ್ತಿಯಲ್ಲಿ ಹಲವಾರು ಶವಗಳನ್ನು ಹೂತು ಹಾಕಲಾಗಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರ ಆರೋಪಿ ಚಿನ್ನಯ್ಯನನ್ನು ಇಂದು ಎಸ್.ಐ.ಟಿ ಅಧಿಕಾರಿಗಳು ಬಿಗಿ ಭದ್ರತೆಯಲ್ಲಿ ಮಹಜರಿಗಾಗಿ ತಮಿಳುನಾಡಿಗೆ ಕರೆದೊಯ್ದಿದ್ದಾರೆ. ನ್ಯಾಯಾಲಯಕ್ಕೆ ಹಾಜರುಪಡಿಸಲು ಕೆಲವೇ ದಿನಗಳಿರುವುದರಿಂದ ವಿಚಾರಣೆ ಪ್ರಕ್ರಿಯೆ ಬಹುತೇಕ ಪೂರ್ಣಗೊಳಿಸಿ, ಮಹಜರು ನಡೆಸಲು ವಿಶೇಷ ತನಿಖಾ ದಳ ಮುಂದಾಗಿದೆ.

><><><><><><><><><

ಭಾರತದ ಸೇನೆಯ ಶಕ್ತಿ ಎಷ್ಟಿದೆ ಎನ್ನುವುದನ್ನು ಆಪರೇಷನ್ ಸಿಂದೂರ ತೋರಿಸಿದೆ. ಆಪರೇಷನ್ ಸಿಂದೂರ ಯಶಸ್ಸಿಗೆ ಸಂಸತ್ತು ಅಭಿನಂದನೆ ಸಲ್ಲಿಸಿದೆ ಎಂದು ಮೇಘಾಲಯ ರಾಜ್ಯಪಾಲ ಸಿ.ಎಚ್.ವಿಜಯಶಂಕರ್ ಹೇಳಿದ್ದಾರೆ. ತುಮಕೂರು ನಗರದ ಜೂನಿಯರ್ ಕಾಲೇಜಿನ ಆವರಣದಲ್ಲಿ

ನಡೆದ ಆಪರೇಷನ್ ಸಿಂದೂರ ವಿಜಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪೆಹಲ್ಗಾಮ್‌ನಲ್ಲಿ ಭಾರತೀಯ ಪ್ರವಾಸಿಗರನ್ನು ಹತ್ಯೆ ಮಾಡಿದ ಭಯೋತ್ಪಾದಕರಿಗೆ ತಕ್ಕ ಪಾಠವನ್ನು ಕೇಂದ್ರ ಸರ್ಕಾರ ಕಲಿಸಿದೆ ಎಂದರು. ಕೇಂದ್ರ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮಾತನಾಡಿ, ಭಯೋತ್ಪಾದನೆಯ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಅವರು ಹೊಸ ಮಾನದಂಡವಾಗಿ ಆಪರೇಷನ್ ಸಿಂದೂರ ಪ್ರಾರಂಭಿಸಿದರು. ಪ್ರವಾಸಿಗರನ್ನು ಹತ್ಯೆ ಮಾಡಿ ಮಹಿಳೆಯರ ಸಿಂಧೂರ ಅಳಿಸಿದರೆ ಏನಾಗಲಿದೆ ಎನ್ನುವುದನ್ನು ಭಾರತೀಯ ಸೇನೆ ತೋರಿಸಿಕೊಟ್ಟಿದೆ ಎಂದು ಹೇಳಿದರು.  ಆತ್ಮನಿರ್ಭರ ಭಾರತ, ಮೇಕ್ ಇನ್ ಇಂಡಿಯಾ ಯೋಜನೆಗಳ ಮೂಲಕ ಭಾರತದಲ್ಲಿಯೇ ಅಭಿವೃದ್ಧಿಗೊಂಡಿರುವ ತಂತ್ರಜ್ಞಾನದ ಮೂಲಕ ಭಾರತದ ರಕ್ಷಣಾ ಪಡೆ ಎಷ್ಟು ಶಕ್ತವಾಗಿದೆ ಎನ್ನುವುದನ್ನು ಭಾರತೀಯ ಸೇನೆ ತೋರಿಸಿದೆ. ಎಂದರು.

><><><><><><><><

ರಾಜ್ಯದಲ್ಲಿ ಅನೇಕ ಪಾಳೇಗಾರರು ಉತ್ತಮ ಆಡಳಿತ ನೀಡಿದ್ದಾರೆ. ಅವುಗಳ ಪ್ರದೇಶಾಭಿವೃದ್ಧಿಗಾಗಿ ಸರ್ಕಾರ ವಿಶೇಷ ಪಾಳೆಗಾರರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರಚಿಸಬೇಕು ಎಂದು ಚಿಂತಕ ಬರಗೂರು ರಾಮಚಂದ್ರಪ್ಪ ಆಗ್ರಹಿಸಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದ ಗರುಡಾದ್ರಿ ಕಲಾ ಮಂದಿರದಲ್ಲಿ ಹಮ್ಮಿಕೊಂಡಿದ್ದ 'ಕರ್ನಾಟಕ ಶೂರ ನಾಯಕ ಸಂಸ್ಥಾನ ಸುರಪುರ' ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲೆಲ್ಲಿ ಪಾಳೆ, ಪಟ್ಟುಗಳಿದ್ದವು ಅವುಗಳ ಅಭಿವೃದ್ಧಿ ಮಾಡಬೇಕು. ಯಾವುದೇ ಧಕ್ಕೆಯಾಗದಂತೆ ಕೋಟೆಗಳನ್ನು ಮರು ನಿರ್ಮಾಣ ಮಾಡಬೇಕು ಎಂದು ಒತ್ತಾಯಿಸಿದರು. ಅಲ್ಲಿಯ ಇತಿಹಾಸ ತಿಳಿಸುವ ವಸ್ತುಸಂಗ್ರಾಹಲಯ ಸ್ಥಾಪಿಸಬೇಕು. ಪ್ರವಾಸಿ ಕೇಂದ್ರವನ್ನಾಗಿ ರೂಪಿಸಬೇಕು. ಸ್ಥಳೀಯ ಇತಿಹಾಸವನ್ನು ಯುವಜನತೆಗೆ ತಿಳಿ ಹೇಳುವ ಕೆಲಸವಾಗಬೇಕು. ಸುರಪುರ ಸಂಸ್ಥಾನದ ವಸ್ತುಸಂಗ್ರಾಹಲಯ ಮಾಡಬೇಕು ಎಂದರು. ಸುರಪುರ ವೀರರ, ಶೂರರ, ಸಾಮರಸ್ಯ, ಸೌಹಾರ್ದದ ಸಂಸ್ಥಾನವಾಗಿತ್ತು. ಈ ಸಂಸ್ಥಾನದ ಅರಸರು ಅನೇಕ ಜನಹಿತ ಕಾರ್ಯಗಳೊಂದಿಗೆ ಎಲ್ಲಾ ಜಾತಿ, ಧರ್ಮಗಳಿಗೆ ಪ್ರಾತಿನಿಧ್ಯ ನೀಡಿದ್ದರು. ಕೆಳ ಸಮುದಾಯಗಳಿಗೆ ಗೌರವ ಮತ್ತು ಪ್ರಾತಿನಿಧ್ಯ ನೀಡಿ, ಎಲ್ಲರನ್ನು ಸಮಾನವಾಗಿ ನೋಡುತ್ತಿದ್ದ ಮನೋಭಾವ, ಮಹಿಳೆಯರಿಗೆ ನೀಡಿದ ಪ್ರಾಶಸ್ತ್ಯ ಅನನ್ಯವಾಗಿದೆ ಎಂದು ಬರಗೂರು ರಾಮಚಂದ್ರಪ್ಪ ಹೇಳಿದರು.

><><><><><><><><

ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ೧೩ನೇ ಘಟಿಕೋತ್ಸವ ಸೆಪ್ಟೆಂಬರ್ ೪ ರಂದು ವಿಶ್ವವಿದ್ಯಾಲಯದ ಬಯಲು ರಂಗ ಮಂದಿರದಲ್ಲಿ ನಡೆಯಲಿದೆ. ಘಟಿಕೋತ್ಸವದ ಅಧ್ಯಕ್ಷತೆಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಹಿಸಲಿದ್ದು, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರಲಿದ್ದಾರೆ. ನವದೆಹಲಿಯ ಇಂಟರ್ ಯುನಿವರ್ಸಿಟಿ ಆಕ್ಸಲೇಟರ್ ಸೆಂಟರ್‌ನ ನಿರ್ದೇಶಕ ಪ್ರೊಫೆಸರ್ ಅವಿನಾಶ್ ಚಂದ್ರಪಾಂಡೆ ಘಟಿಕೋತ್ಸವ ಭಾಷಣ

ಮಾಡಲಿದ್ದಾರೆ ಎಂದು ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಮುನಿರಾಜ ತಿಳಿಸಿದ್ದಾರೆ.

><><><><><><><><

ಬಳ್ಳಾರಿ ತಾಲೂಕಿನ ಕೊಳಗಲ್ಲು ಗ್ರಾಮದ ಬಳಿ ೧೫ ಎಕರೆ ಜಮೀನಿನಲ್ಲಿ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಿಂದ ಮೆಗಾ ಹೈಟೆಕ್ ಡೇರಿ ನಿರ್ಮಾಣಕ್ಕಾಗಿ ಜಮೀನು ಖರೀದಿಸಲು ಸರ್ಕಾರ ಅನುಮತಿ ನೀಡಿದೆ. ೧೫ ಎಕರೆ ಸರ್ಕಾರದ ಜಮೀನನ್ನು ಒಕ್ಕೂಟವು ಪ್ರಸಕ್ತ ಸಾಲಿನ ಮೂಲಸೌಕರ್ಯ ನಿಧಿಯ ೬ ಕೋಟಿ ರೂಪಾಯಿಗಳ ಪೈಕಿ ೨ ಕೋಟಿ ೯೨ ಲಕ್ಷ ರೂಪಾಯಿಗಳನ್ನು  ಪಾವತಿಸಿಸಲು ಸಮ್ಮತಿಸಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ತಿಳಿಸಿದ್ದಾರೆ.

><><><><><><><><

ಹಾವೇರಿ ಜಿಲ್ಲೆಯು ವಿವಿಧ ಉತ್ಪನ್ನ ರಫ್ತು ವ್ಯವಹಾರದಲ್ಲಿ ರಾಜ್ಯದಲ್ಲೇ ಮುಂಚೂಣಿಯಲ್ಲಿದೆ. ೨೦೨೪-೨೫ನೇ ಸಾಲಿನಲ್ಲಿ ಹಾವೇರಿ ಜಿಲ್ಲೆಯಿಂದ ೫೭೦ ಕೋಟಿ ರೂಪಾಯಿ ಮೊತ್ತದ ಉತ್ಪನ್ನಗಳು ರಫ್ತಾಗಿವೆ ಎಂದು ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರದ ಧಾರವಾಡ ಉಪನಿರ್ದೇಶಕ ಟಿ.ಎಸ್. ಮಲ್ಲಿಕಾರ್ಜುನ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಟಿಪಿಸಿ ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಲೀನ್ ಯೋಜನೆ ಹಾಗೂ ರಫ್ತು ಕುರಿತ ಒಂದು ದಿನದ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.  ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಯಾಗಿ ವಿಟಿಪಿಸಿ ಕೆಲಸ ಮಾಡುತ್ತಿದೆ. ಇದು ಕರ್ನಾಟಕದಲ್ಲಿ ರಫ್ತು ಉತ್ತೇಜನಕ್ಕೆ ಪ್ರಾಮುಖ್ಯತೆ ನೀಡಿದೆ. ಇಡೀ ಭಾರತದಲ್ಲಿಯೇ ಕರ್ನಾಟಕವು ಮಾಹಿತಿ ತಂತ್ರಜ್ಞಾನ ಮತ್ತು ಸೇವಾ ರಫ್ತಿನಲ್ಲಿ ಮೊದಲ ಸ್ಥಾನದಲ್ಲಿದೆ. ದೇಶದ ಒಟ್ಟು ರಫ್ತಿನಲ್ಲಿ ಕರ್ನಾಟಕ ಶೇಕಡ ೪೦ರಷ್ಟು ರಫ್ತು ಮಾಡುತ್ತಿದೆ ಎಂದು ತಿಳಿಸಿದರು. ವಸ್ತುಗಳ ರಫ್ತಿನಲ್ಲಿ ಕರ್ನಾಟಕ ದೇಶದಲ್ಲಿಯೇ ೪ನೇ ಸ್ಥಾನದಲ್ಲಿದೆ. ರಾಜ್ಯದ ೩೧ ಜಿಲ್ಲೆಗಳಿಂದಲೂ ವಿವಿಧ ಉತ್ಪನ್ನಗಳನ್ನು ರಫ್ತು ಮಾಡಲಾಗುತ್ತಿದೆ. ೨೦೨೪-೨೫ನೇ ಸಾಲಿನಲ್ಲಿ ಹಾವೇರಿ ಜಿಲ್ಲೆಯಿಂದ ೫೭೦ ಕೋಟಿ ರೂಪಾಯಿ ಮೊತ್ತದ ಖಾರದ ಪುಡಿ ಹಾಗೂ ತರಕಾರಿಯನ್ನು ಬೇರೆ ದೇಶಗಳಿಗೆ ರಫ್ತು ಮಾಡಲಾಗಿದೆ ಎಂದು ಟಿ.ಎಸ್.ಮಲ್ಲಿಕಾರ್ಜುನ ಮಾಹಿತಿ ನೀಡಿದರು.

><><><><><><><><

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ.  ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು,

ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

><><><><><><><><

ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಸಂಭವಿಸಿದ ಪಟಾಕಿ ಅವಘಡದಲ್ಲಿ ಒಬ್ಬ ಬಾಲಕ ಮೃತಪಟ್ಟಿದ್ದು, ೧೦ ಮಂದಿ ಗಾಯಗೊಂಡಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರದ ಮುತ್ತೂರಿನಲ್ಲಿ ನಿನ್ನೆ ರಾತ್ರಿ ನಡೆದಿದೆ. ಬಾಲಕನನ್ನು ೧೫ ವರ್ಷದ ತನುಷ್ ರಾವ್ ಎಂದು ಗುರುತಿಸಲಾಗಿದೆ. ತೀವ್ರವಾಗಿ ಗಾಯಗೊಂಡ ತನುಷ್ ರಾವ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಸಾವನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ನಿನ್ನೆ ಸಂಜೆ ಗಣೇಶ ವಿಸರ್ಜನೆಗೆಂದು ಟ್ರ್ಯಾಕ್ಟರ್‌ನಲ್ಲಿ ಮೆರವಣಿಗೆ ಬರುವ ವೇಳೆ, ಮೆರವಣಿಗೆ ಮಾಡಲು ಕರೆಸಲಾಗಿದ್ದ ಪವರ್ ಲಿಫ್ಟರ್ ವಾಹನ ಬಿಸಿಯಾಗಿ, ಅದರ ಮೇಲೆ ಇಡಲಾಗಿದ್ದ ಪಟಾಕಿಗಳು ಏಕಾಏಕಿ ಸ್ಫೋಟಗೊಂಡಿವೆ. ಇದೇ ವೇಳೆ ಬಂದೋಬಸ್ತ್ ಕರ್ತವ್ಯದಲ್ಲಿದ್ದ ಪೊಲೀಸ್ ಕಾನ್ಸ್‌ಟೇಬಲ್ ಜಾಕಿರ್ ಹುಸೇನ್ ಎಂಬುವರ ಕೈಗೆ ಪಟಾಕಿ ಸಿಡಿದು, ಸುಟ್ಟ ಗಾಯಗಳಾಗಿದ್ದು, ಅವರನ್ನು ಸಮೀಪದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಜಿಲ್ಲಾಧಿಕಾರಿ ಎ.ಬಿ.ಬಸವರಾಜು, ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ.ಬಾಬಾ, ಅಪರ ಪೊಲೀಸ್ ವರಿಷ್ಠಾಧಿಕಾರಿ ನಾಗರಾಜ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ವರದಿಯಾಗಿದೆ. ಘಟನೆ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಪಟಾಕಿ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

><><><><><><><><